## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಶಾರದಮ್ಮ, ಹಿಂದಿನ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ, (ನಿವೃತ್ತ) ದುಗ್ಗಹಳ್ಳಿ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವ ಕುರಿತು– ಅಂತಿಮ ದಂಡನಾದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಜಿಲ್ಲೆ, ರವರ ಪತ್ರ ಸಂಖ್ಯೆ: ಸಿ.ಸಿ.ಎ/18/2013–14. ದಿನಾಂಕ:05–07–2016.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಜಿಲ್ಲೆ, ರವರ ಪತ್ರ ಸಂಖ್ಯೆ: ಸಿ.ಸಿ.ಎ/18/2013–14. ದಿನಾಂಕ:12–12–2016.
3. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು ರವರ ಪತ್ರ ಸಂಖ್ಯೆ:PSC 173 CNS 2016, ದಿನಾಂಕ:09–05–2017.

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ರವರ ಪತ್ರದಲ್ಲಿ ಶ್ರೀಮತಿ ಶಾರದಮ್ಮ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದುಗ್ಗಹಳ್ಳಿ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರು ವಸತಿ ಯೋಜನೆಯಡಿ ನಡೆದಿರುವ ಅವ್ಯವಹಾರದ ಬಗ್ಗೆ ಶ್ರೀ ಎನ್. ನಾರಾಯಣ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ರವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಲಾಗಿರುತ್ತದೆ. ಸದರಿಯವರು ವಿಚಾರಣಾ ವರದಿಯನ್ನು ಅಪಾದಿತ ನೌಕರರಿಗೆ ಜಾರಿ ಮಾಡಲಾಗಿದ್ದು, ಸದರಿ ಅಪಾದಿತ ನೌಕರರು ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯಲ್ಲಿ ವಿಚಾರಣಾ ವರದಿಯನ್ನು ತಿರಸ್ಕರಿಸುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಗಳು ಶ್ರೀಮತಿ ಶಾರದಮ್ಮ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದುಗ್ಗಹಳ್ಳಿ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು ರವರ ವಿರುದ್ಧ ಮಾಡಲಾದ ಆರೋಪಗಳು ಸಾಬೀತಾಗಿರುವುದಾಗಿ ವಿಚಾರಣಾ ವರದಿಯನ್ನು ಸಲ್ಲಿಸಿದ್ದ ಹಿನ್ನಲೆಯಲ್ಲಿ ಆಪಾದಿತ ನೌಕರರಿಂದ ಸರ್ಕಾರಕ್ಕಾಗಿರುವ ನಷ್ಟದ ಬಗ್ಗೆ ಮಾಹಿತಿಯನ್ನು ಸಲ್ಲಿಸುವಂತೆ ಮುಖ್ಯ ಯೋಜನಾಧಿಕಾರಿಗಳಿಗೆ ಸೂಚಿಸಿದ್ದು, ಸದರಿಯವರು ದಿನಾಂಕ: 07–04–2016 ರಂದು ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ ಅಪಾದಿತ ನೌಕರರಿಂದ ವಸತಿ ಯೋಜನೆಗಳಿಗೆ ಬಿಡುಗಡೆಯಾಗಿರುವ ರೂ. 1.00 ಲಕ್ಷಗಳ ಅನುದಾನವನ್ನು ಶೇ.11ರ ಬಡ್ಡಿಯೊಡನೆ ವಸೂಲು ಮಾಡಲು ಸೂಚಿಸಿರುತ್ತಾರೆ.

ಶ್ರೀಮತಿ ಶಾರದಮ್ಮ, ಹಿಂದಿನ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದುಗ್ಗಹಳ್ಳಿ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು, ರವರು ವಯೋನಿವೃತ್ತಿಯನ್ನು ಹೊಂದಿರುವುದರಿಂದ ಕೆ.ಸಿ.ಎಸ್.ಆರ್. 214ರ ರೀತ್ಯ ನಿವೃತ್ತ ನೌಕರರಿಗೆ ಸಂಬಂಧಿಸಿದಂತೆ ಸರ್ಕಾರವು ದಂಡನೆಯನ್ನು ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುವುದರಿಂದ ಆಪಾದಿತ ನೌಕರರು ನಂಜನಗೂಡು ತಾಲ್ಲೂಕು, ದುಗ್ಗಹಳ್ಳಿ ಗ್ರಾಮ ಪಂಚಾಯತಿನಲ್ಲಿ ಎಸಗಿರುವ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ವಿಚಾರಣಾಧಿಕಾರಿಗಳು ಸಲ್ಲಿಸಿರುವ ವಿಚಾರಣಾ ವರದಿಯ ಬಗ್ಗೆ ಸರ್ಕಾರವು ಸಕ್ಷಮ ಪ್ರಾಧಿಕಾರವಾಗಿರುವುದರಿಂದ ಅಂತಿಮ ದಂಡನಾದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ರವರ ಪತ್ರದಲ್ಲಿ ಶ್ರೀಮತಿ ಶಾರದಮ್ಮ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ (ನಿವೃತ್ತ) ರವರಿಂದ ಸರ್ಕಾರಕ್ಕಾದ ನಷ್ಟವನ್ನು ಅವರ ನಿವೃತ್ತಿ ವೇತನದಿಂದ ವಸೂಲು ಮಾಡುವ ಬಗ್ಗೆ ಸರ್ಕಾರದಿಂದಲೇ ಆದೇಶವನ್ನು ಹೊರಡಿಸಬೇಕಾಗಿರುವುದರಿಂದ ಹಾಗೂ ಕರ್ನಾಟಕ ಸಿವಿಲ್ ಸೇವಾ ನಿಯಮಗಳು, ನಿಯಮ 214(1)(ಬಿ) ಪ್ರಕಾರ ಸದರಿ ಆದೇಶವನ್ನು ಹೊರಡಿಸಲು ಸರ್ಕಾರವು ಸಕ್ಷಮ ಪ್ರಾಧಿಕಾರವಾಗಿರುವುದರಿಂದ ನಿವೃತ್ತ ಆಪಾದಿತ ನೌಕರರಿಂದ ಸರ್ಕಾರಕ್ಕಾದ ನಷ್ಟ ರೂ.1.00 ಲಕ್ಷಗಳನ್ನು ಶೇ 8 ರ ಬಡ್ಡಿಯೊಂದಿಗೆ ವಸೂಲು ಮಾಡುವ ಬಗ್ಗೆ ಸರ್ಕಾರದಿಂದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ ಓದಲಾದ(3) ರಲ್ಲಿ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ ರವರ ಪತ್ರದಲ್ಲಿ ಶ್ರೀಮತಿ ಶಾರದಮ್ಮ, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರವರು ಸರ್ಕಾರಕ್ಕೆ ಉಂಟು ಮಾಡಿರುವ ನಷ್ಟವಾದ ರೂ.1.00 ಲಕ್ಷಗಳನ್ನು ಶೇ 8 ರ ಬಡ್ಡಿಯೊಂದಿಗೆ ಕರ್ನಾಟಕ ಸಿವಿಲ್ ಸೇವಾ ನಿಯಮಗಳು, ನಿಯಮ 214(1)(ಬಿ) ರಂತೆ ವಸೂಲಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗದ ಸಹಮತಿ ನೀಡಿರುತ್ತದೆ. ವಿಚಾರಣಾ ವರದಿಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗಿದೆ. ನಿವೃತ್ತ ಆಪಾದಿತ ನೌಕರರಿಗೆ ದಂಡನಾದೇಶವನ್ನು ಹೊರಡಿಸಲು ಕೆ.ಸಿ.ಎಸ್.ಆರ್. ನಿಯಮ 214 ರಂತೆ ಸರ್ಕಾರವು ಸಕ್ಷಮ ಪ್ರಾಧಿಕಾರವಾಗಿರುತ್ತದೆ. ಆದುದರಿಂದ ಸದರಿಯವರ ವಿರುದ್ಧ ಅಂತಿಮ ದಂಡನಾದೇಶವನ್ನು ಹೊರಡಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 443 ಗ್ರಾಪಂಕಾ 2016,**
**ಬೆಂಗಳೂರು, ದಿನಾಂಕ: 05-07-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಶ್ರೀಮತಿ ಶಾರದಮ್ಮ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದುಗ್ಗಹಳ್ಳಿ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು ಮೈಸೂರು ಜಿಲ್ಲೆ, ಇವರು ವಸತಿ ಯೋಜನೆಗಳಿಗೆ ಬಿಡುಗಡೆಯಾಗಿರುವ ರೂ. 1.00 ಲಕ್ಷಗಳ (ಒಂದು ಲಕ್ಷ) ಅನುದಾನವನ್ನು ದುರುಪಯೋಗ ಪಡಿಸಿಕೊಂಡ ಮೊತ್ತವನ್ನು ಇವರು ವಯೋನಿವೃತ್ತಿಯನ್ನು ಹೊಂದಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು ನಿಯಮ 214(1)(ಬಿ) ರಂತೆ ಶೇ.8 ರಷ್ಟು ಬಡ್ಡಿಯೊಡನೆ ವಸೂಲು ಮಾಡಲು ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, (ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2) ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.
5) ಶ್ರೀಮತಿ ಶಾರದಮ್ಮ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದುಗ್ಗಹಳ್ಳಿ ಗ್ರಾಮ ಪಂಚಾಯತಿ, ನಂಜನಗೂಡು ತಾಲ್ಲೂಕು ಮೈಸೂರು ಜಿಲ್ಲೆ ರವರಿಗೆ (ನಂಜನಗೂಡು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯವರ ಮುಖಾಂತರ).
6) ಶಾಖಾ ರಕ್ಷ ಕಡತ/ ಹೆಚ್ಚಿನ ಪ್ರತಿ.
7) ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.